ರಾಮನಾಮ ಪಾಯಸಕ್ಕೆ ಕೃಷ್ಣನಾಮ ಸಕ್ಕರೆ
ವಿಠಲನಾಮ ತುಪ್ಪವ ಬೆರೆಸಿ ಬಾಯಿ ಚಪ್ಪರಿಸಿರೊ
ಒಮ್ಮನ ಗೋಧಿಯ ತಂದು ವೈರಾಗ್ಯ ಕಲ್ಲಲಿ ಬೀಸಿ
ಸುಮ್ಮನ ಸಜ್ಜಿಗೆ ತೆಗೆದು ಸಣ್ಣ ಸೇವೆಗೆ ಹೊಸೆದು
ಹೃದಯವೆಂಬೊ ಪಾತ್ರೆಯೊಳಗೆ ಭಾವವೆಂಬೊ ಎಸರು ಇಟ್ಟು
ಬುದ್ಧಿಯಿಂದ ಪಕ್ವವ ಮಾಡಿ ಹರಿವಾಣದೊಳಗೆ ನೀಡಿ
ಆನಂದ ಆನಂದವೆಂಬೊ ತೇಗು ಬಂದ ಪರಿಯಲಿ
ಆನಂದಮೂರುತಿ ನಮ್ಮ ಪುರಂದರವಿಠಲ ನೆನೆಯಿರೊ